ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ರಾಜ್ಯದಲ್ಲಿ ಘನತ್ಯಾಜ್ಯ ನಿರ್ವಹಣೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

678 (760) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಇತ್ತೀಚೆಗೆ ಬೆಂಗಳೂರು ಸೇರಿದಂತೆ ಘನತ್ಯಾಜ್ಯ ನಿರ್ವಹಣೆಯು ಅತ್ಯಂತ ದೊಡ್ಡ ಸಮಸ್ಯೆಯಾಗಿದ್ದು, ಇದರ ಪರಿಣಾಮಕಾರಿಯಾದ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿದೆ; ಹಾಗೂ ಇದಕ್ಕೆ ತಗಲುವ ವೆಚ್ಚದ ವಿವರ ನೀಡುವುದು;

(ಇ) ಈ ಘನತ್ಯಾಜ್ಯ ಸಂಸ್ಕರಣೆಗಳಿಲ್ಲದೇ ಇದರಿಂದ ವಿದ್ಯುತ್ ಉತ್ಪಾದನೆಗೂ ಅವಕಾಶವಿದೆ ಎಂದು ವರದಿಯಾಗಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು;

(ಈ) ಸರ್ಕಾರದ ಅನೇಕ ಪ್ರತಿನಿಧಿಗಳು ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ವಿವಿಧ ರಾಜ್ಯ ಹಾಗೂ ದೇಶಗಳಿಗೆ ಭೇಟಿ ನೀಡಿ ಘನತ್ಯಾಜ್ಯದ ಬಗ್ಗೆ ಹೊಸ ತರಬೇತಿ ಹಾಗೂ ತಾಂತ್ರಿಕತೆ ತಂದಿದ್ದರೂ ಅದನ್ನು ಅನುಷ್ಠಾನಕ್ಕೆ ತರುವಲ್ಲಿ ಸರ್ಕಾರ ಹಿಂದೇಟು ಹಾಕುತ್ತಿರುವುದಕ್ಕೆ ಕಾರಣವೇನು?